C.C. No.- 6700/2025
CW-9 / PW-7

ಸಿವಿಲ್ ನ್ಯಾಯಾಧೀಶರು ಮತ್ತು ಪ್ರ. ದ. ನ್ಯಾ. ದಂ.ಗಳ ನ್ಯಾಯಾಲಯ, ಕಾರಟಗಿ
(ಸಂಚಾರಿ ನ್ಯಾಯಾಲಯ) ಕಾರಟಗಿ .
ಸಾಕ್ಷಿಯನ್ನು ದಿನಾಂಕ- 01.06.2026 ರಂದು ಕರೆಯಿಸಿ ಪ್ರಾಮಾಣೀಕರಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು- | ರಾಜು |
| ತಂದೆ / ಗಂಡನ ಹೆಸರು- | ವಿಶ್ವನಾಥ |
| ವಯಸ್ಸು- | 54 ವರ್ಷಗಳು |
| ಉದ್ಯೋಗ- | ಎ.ಎಸ್.ಐ ಕನಕಗಿರಿ |
| ವಾಸಸ್ಥಳ- | ಕನಕಗಿರಿ |

ಮುಖ್ಯ ವಿಚಾರಣೆ- ಸ. ಸ. ಅ. ಅವರಿಂದ-

ನಾನು **22-08-2023** ರಿಂದ **2024** ರವರೆಗೂ ಮುಖ್ಯ ಪೇದೆಯಾಗಿ ಕಾರಟಗಿ ಪೋಲಿಸ್ ಠಾಣೆಯಲ್ಲಿ ಕರ್ತವ್ಯವನ್ನು ನಿರ್ವಹಿಸಿರುತ್ತೇನೆ.

2. ದಿಃ 16-11-2023 ರಂದು ಬೆಳಗಿನ 9.30 ಗಂಟೆಗೆ ಸಮಯದಲ್ಲಿ ಠಾಣಾ ಕರ್ತವ್ಯದಲ್ಲಿದ್ದಾಗ ಚಾಸಾ-1 ರವರು ಹಾಜರಾಗಿ ನೀಡಿದ ಗಣಕೀಕೃತ ಫಿರ್ಯಾದಿ ಸಾರಾಂಶದ ಮೇಲಿಂದ ಠಾಣಾ ಮೊಕದ್ದಮೆ ಸಂಖ್ಯೆ 225/2023 ರಂತೆ ಪ್ರಕರಣವನ್ನು ಭಾರತ ದಂಡ ಸಂಹಿತೆ ಕಲಂ 454 ಮತ್ತು 380 ರಡಿಯಲ್ಲಿ ದಾಖಲಿಸಿಕೊಂಡು ಪ್ರ ವ ವರದಿಯನ್ನು ನ್ಯಾಯಾಲಯಕ್ಕೆ ಹಾಗೂ ಹಿರಿಯ ಅಧಿಕಾರಿಗೆ ಸಲ್ಲಿಸಿರುತ್ತೇನೆ. ನಂತರ ಅದೇ ದಿನ ಚಾಸಾ-1 ರವರು ತೋರಿದ ಗುನ್ನಾ ಜಾಗದಲ್ಲಿ ಚಾಸಾ-5 ಮತ್ತು 6 ರವರ ಸಮಕ್ಷಮ ಮಧ್ಯಾಹ್ನ 12.30 ರಿಂದ 01.30 ರವರೆಗೆ ಗುನ್ನಾ ಜಾಗೆ ಪಂಚನಾಮೆ ಮಾಡಿ ಆ ಕಾಲಕ್ಕೆ ಒಂದು ಸ್ಕ್ರೂಡ್ರೈವ್, ಒಂದು ಕಟ್ಟಿಗೆ ಹಿಡಿಕೆಯುಳ್ಳ ಅರ್ಧ ಫೀಟಿನ ಸುತ್ತಿಗೆ, ಒಂದು ಅರ್ಧ ಫೀಟಿನ ಕಬ್ಬಿಣದ ಚಾಣ, ಕೇಸಿನ ಪುರಾವೆ ಕುರಿತು ವಶಪಡಿಸಿಕೊಂಡಿರುತ್ತೇನೆ. ನಂತರ ಮಾನ್ಯ ನ್ಯಾಯಾಲಯಕ್ಕೆ ಸ್ವತ್ತಿನ ಪಟ್ಟಿಯನ್ನು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ದಿನಾಂಕಃ 24-01-2024 ರಂದು ಸದರಿ ಪ್ರಕರಣದಲ್ಲಿ ಆರೋಪಿ ಪತ್ತೆ ಕುರಿತು ನಮ್ಮ ಠಾಣೆಯ ಸಿಬ್ಬಂದಿಯಾದ ಬಸವರಾಜ ಪಿ.ಸಿ ರವರು ನೀಡಿದ ವರದಿಯನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ವರದಿಯಲ್ಲಿ ಆರೋಪಿ ಪತ್ತೆಯಾಗಿರುವುದಿಲ್ಲ

ಎಂದು ವರದಿ ನೀಡಿರುತ್ತಾರೆ. ನಂತರ ದಿನಾಂಕಃ 24-02-2024 ರಂದು ಸದರಿ ಪ್ರಕರಣದಲ್ಲಿ ಆರೋಪಿ ಪತ್ತೆ ಕುರಿತು ನಮ್ಮ ಠಾಣೆಯ ಸಿಬ್ಬಂದಿಯಾದ ಗಂಗಣ್ಣ ಎ.ಎಸ್.ಐ ರವರು ನೀಡಿದ ವರದಿಯನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ವರದಿಯಲ್ಲಿ ಆರೋಪಿ ಪತ್ತೆಯಾಗಿರುವುದಿಲ್ಲ ಎಂದು ವರದಿ ನೀಡಿರುತ್ತಾರೆ. ದಿನಾಂಕಃ 12-03-2024 ರಂದು ಸದರಿ ಪ್ರಕರಣದಲ್ಲಿ ಆರೋಪಿ ಪತ್ತೆ ಕುರಿತು ನಮ್ಮ ಠಾಣೆಯ ಸಿಬ್ಬಂದಿಯಾದ ಗಂಗಾಧರ ಚಿಲಕುರಿ ಮುಖ್ಯ ಪೇದೆಯವರು ನೀಡಿದ ವರದಿಯನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ವರದಿಯಲ್ಲಿ ಆರೋಪಿ ಪತ್ತೆಯಾಗಿರುವುದಿಲ್ಲ ಎಂದು ವರದಿ ನೀಡಿರುತ್ತಾರೆ. ದಿನಾಂಕಃ 10-04-2024 ರಂದು ಸದರಿ ಪ್ರಕರಣದಲ್ಲಿ ಆರೋಪಿ ಪತ್ತೆ ಕುರಿತು ನಮ್ಮ ಠಾಣೆಯ ಸಿಬ್ಬಂದಿಯಾದ ಶಿವಕುಮಾರ ಪಿ.ಸಿ ರವರು ನೀಡಿದ ವರದಿಯನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ವರದಿಯಲ್ಲಿ ಆರೋಪಿ ಪತ್ತೆಯಾಗಿರುವುದಿಲ್ಲ ಎಂದು ವರದಿ ನೀಡಿರುತ್ತಾರೆ. ದಿನಾಂಕಃ 10-05-2024 ರಂದು ಸದರಿ ಪ್ರಕರಣದಲ್ಲಿ ಆರೋಪಿ ಪತ್ತೆ ಕುರಿತು ನಮ್ಮ ಠಾಣೆಯ ಸಿಬ್ಬಂದಿಯಾದ ಶರಣಪ್ಪ ಪಿ.ಸಿ ರವರು ನೀಡಿದ ವರದಿಯನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ವರದಿಯಲ್ಲಿ ಆರೋಪಿ ಪತ್ತೆಯಾಗಿರುವುದಿಲ್ಲ ಎಂದು ವರದಿ ನೀಡಿರುತ್ತಾರೆ. ದಿನಾಂಕಃ 24-05-2024 ಮತ್ತು 04-07-2024 ರಂದು ಸದರಿ ಪ್ರಕರಣದಲ್ಲಿ ಆರೋಪಿ ಪತ್ತೆ ಕುರಿತು ನಮ್ಮ ಠಾಣೆಯ ಸಿಬ್ಬಂದಿಯಾದ ನಾಗರಾಜ ಪಿ.ಸಿ ರವರು ನೀಡಿದ ವರದಿಗಳನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ವರದಿಗಳಲ್ಲಿ ಆರೋಪಿ ಪತ್ತೆಯಾಗಿರುವುದಿಲ್ಲ ಎಂದು ವರದಿಗಳನ್ನು ನೀಡಿರುತ್ತಾರೆ. ಮುಂದಿನ ತನಿಖೆಯ ಕುರಿತು ರಮೇಶ ಮುಖ್ಯ ಪೇದೆಯವರಿಗೆ ಕಡತಗಳನ್ನು ಹಸ್ತಾಂತರಿಸಿರುತ್ತೇನೆ.

3. ಸಾಕ್ಷಿಯು ಪಿರ್ಯಾದಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ಈಗ ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ಈಗ ನಿಪಿ-2(ಸಿ)

ಎಂದು ಗುರುತಿಸಲಾಯಿತು. ಸಾಕ್ಷಿಯು ಪಿರ್ಯಾದಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ಈಗ ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಸಿಬ್ಬಂದಿಗಳು ನೀಡಿದ ವರದಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-8 ರಿಂದ 14 ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ಈಗ ನಿಪಿ-8(ಎ) ರಿಂದ 14(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಮು.ಮಾ-1 ರಿಂದ 3 ನ್ನು ನೋಡಿ ಗುರುತಿಸಿರುತ್ತಾರೆ.

<u>ಪಾಟೀಸವಾಲು- ಶ್ರೀ ಹೆಚ್.ಬಿ.ಎ ಆರೋಪಿತರ ಪರ ವಕೀಲರಿಂದ-</u>

4. ಆ ದಿನ ಘಟನೆ ನಡೆದ ದಿನ ಕರ್ತವ್ಯದಲ್ಲಿದ್ದೆ ಎಂದು ತೋರಿಸಲು ನ್ಯಾಯಾಲಯಕ್ಕೆ ದಾಖಲೆಗಳನ್ನು ಸಲ್ಲಿಸಿದ್ದೇನೆ. ನಾನು ಯಾವುದೇ ಪಂಚನಾಮೆ ಮಾಡಿಲ್ಲ ಹಾಗೂ ಮು.ಮಾ-1 ರಿಂದ 3 ಜಪ್ತಿಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಠಾಣೆಯಲ್ಲಿ ಕುಳಿತು ಪಂಚನಾಮೆಯನ್ನು ತಯಾರಿಸಿದ್ದೇನೆ ಎಂದರೆ ಸರಿಯಲ್ಲ. ನಾನು ನಿಪಿ-8 ರಿಂದ 14 ವರದಿಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಅವುಗಳನ್ನು ನೀಡಿದವರು ನಮ್ಮ ಠಾಣೆಯ ಸಿಬ್ಬಂದಿಗಳು ಎಂದರೆ ಸರಿ. ನಿಪಿ-8 ರಿಂದ 14 ವರದಿಗಳನ್ನು ಠಾಣೆಯಲ್ಲಿ ಕುಳಿತು ತಯಾರಿಸಿದ್ದೇನೆ ಎಂದರೆ ಸರಿಯಲ್ಲ. ಆರೋಪಿ ಯಾವುದೇ ಅಪರಾಧ ಮಾಡದೇ ಇದ್ದರೂ ಸಹ ಆತನ ವಿರುದ್ಧ ಸುಳ್ಳು ದೂರನ್ನು ದಾಖಲಿಸಿಕೊಂಡು ಸುಳ್ಳು ಪ್ರ.ವ.ವರದಿಯನ್ನು ತಯಾರಿಸಿರುತ್ತೇನೆ ಎಂದರೆ ಸರಿಯಲ್ಲ. ಮು.ಮಾ-1 ರಿಂದ 3 ಹಾಗೂ ಆರೋಪಿಗೆ ಯಾವುದೇ ಸಂಬಂಧವಿಲ್ಲ ಎಂದರೆ ಸರಿಯಲ್ಲ. ಚಾಸಾ-5 ಮತ್ತು 6 ನಮ್ಮ ಠಾಣೆಯ ಖಾಯಂ ಪಂಚರು ಎಂದರೆ ಸರಿಯಲ್ಲ. ಚಾಸಾ-1 ರವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿಯನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ.

ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ.ಗಳು, ಕಾರಟಗಿ.
**(ಸಂಚಾರಿ ನ್ಯಾಯಾಲಯ ಕಾರಟಗಿ)**